**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹೊನ್ನಾವರ. ಸಿ.ಸಿ ನಂ.428/2024.**

ಪಿರ್ಯಾದುದಾರರುಃ- ಸೇಂಟ್ ಮಿಲಾಗ್ರಿಸ್ ಕ್ರೆಡಿಟ್ ಸೌಹಾರ್ದ ಕೋ-ಆಪರೇಟಿವ್
ಸೂಸೈಟಿ ಲಿ., ಮಂಕಿ ಶಾಖೆ,
ಪ್ರತಿನಿಧಿಸುವವರು,
ಶ್ರೀ ಅಣ್ಣಪ್ಪ ಮಂಜುನಾಥ ನಾಯ್ಕ,
ವಯಸ್ಸು ಸುಮಾರು 37 ವರ್ಷ,
ವೃತ್ತಿಃ- ಮ್ಯಾನೇಜರ.
ತಾಲೂಕುಃ ಹೊನ್ನಾವರ, (ಉ.ಕ).

**-ವಿರುದ್ಧ-**

ಆರೋಪಿಯ ಹೆಸರುಃ- ದೇವಿ ರಾಮ ನಾಯ್ಕ,
ಸಾಕೀನಃ- ಮಡಿ,
ಪೋಸ್ಟಃ ಮಂಕಿ,
ತಾಲೂಕುಃ- ಹೊನ್ನಾವರ, (ಉ.ಕ.).

****

**ದಂಡ ಪ್ರಕ್ರಿಯಾ ಸಂಹಿತೆ ಕಲಂ. 313 ರನ್ವಯ ಆರೋಪಿಯ ಹೇಳಿಕೆ.**

ಪ್ರಶ್ನೆಃ 1. ನೀವು ಪಿರ್ಯಾದುದಾರರ ಪರವಾಗಿ ಫ್ರಾಸಾ-1 ರವರ ಹೇಳಿಕೆಯನ್ನು ಕೇಳಿದ್ದೀರಾ?

ಆರೋಪಿಯ ಉತ್ತರಃ- ಕೇಳಿದ್ದೇನೆ

ಪ್ರಶ್ನೆಃ 2. ಫ್ರಾಸಾ-1 ರವರು ತಮ್ಮ ಸಾಕ್ಷ್ಯದಲ್ಲಿ, ಪಿರ್ಯಾದಿಯವರ ಸಂಸ್ಥೆಯಲ್ಲಿ ರಾಜೇಶ ರಾಮ ನಾಯ್ಕ ರವರು Business Loan ಇದರ ಖಾತೆ ನಂ.ಬಿ.ಎಲ್-1719 ನೇದರಂತೆ ಸಾಲವನ್ನು ಪಡೆದುಕೊಂಡಿದ್ದು ಇರುತ್ತದೆ, ಸದರಿ ಸಾಲಕ್ಕೆ ಆರೋಪಿಯಾದ ನೀವು ಜಾಮೀನುದಾರರಾಗಿದ್ದು, ಸದ್ರಿ ಸಾಲಕ್ಕೆ ಸಂಬಂಧಪಟ್ಟಂತೆ ನೀವು ಪಿರ್ಯಾದಿ ಸಂಸ್ಥೆಯ ಹೆಸರಿಗೆ ನಿಮ್ಮ ಬ್ಯಾಂಕ್ ಖಾತೆಯುಳ್ಳ **ಕೆನರಾ ಬ್ಯಾಂಕ್., ಮಂಕಿ** ಶಾಖೆಯ ನಿಪಿ-1 ರ ಚೆಕ್ ನಂ.398712 ನ್ನು ದಿನಾಂಕ 05-04-2024 ರಂದು ರೂ. 45,470/- ಎಂದು ನಮೂದಿಸಿ ಚೆಕ್ ಗೆ ಸಹಿ

ಮಾಡಿಕೊಟ್ಟು, ಸದರಿ ಚೆಕ್ ನ್ನು ಬ್ಯಾಂಕ್ ಗೆ ಹಾಜರುಪಡಿಸಿದ ಕೂಡಲೇ ಹಣ ಸಿಗುತ್ತದೆ ಎಂದು ಭರವಸೆ ನೀಡಿರುತ್ತೀರೆಂದು ಸಾಕ್ಷಿ ನುಡಿದಿರುತ್ತಾರೆ ಇದಕ್ಕೆ ನೀವೇನು ಹೇಳುವಿರಿ?

ಆರೋಪಿಯ ಉತ್ತರಃ- ಸುಳ್ಳು

ಪ್ರಶ್ನೆಃ 3. ಫ್ರಾಸಾ-1 ರವರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಪಿರ್ಯಾದಿಯವರು ಹಣ ಪಡೆಯುವ ಸಲುವಾಗಿ ಸದರಿ ಚೆಕನ್ನು ಅವರ ಸಂಸ್ಥೆಯ ಖಾತೆಯಿರುವ **ದಿ ಹೊನ್ನಾವರ ಅರ್ಬನ್ ಕೊ-ಆಪರೇಟಿವ್ ಬ್ಯಾಂಕ್ ಲಿ., ಮಂಕಿ** ಶಾಖೆಯಲ್ಲಿ ಹಾಜರುಪಡಿಸಿದಾಗ, ಸದರಿ ಬ್ಯಾಂಕ್ ನವರು, 'Cheque Destroyed' ಎಂದು ತಿಳಿಸಿ ಸದರಿ ಚೆಕನ್ನು ದಿನಾಂಕ 08-04-2024 ರಂದು ನಿಪಿ-2 ರ ಮೆಮೋದೊಂದಿಗೆ ವಾಪಾಸ್ ನೀಡಿರುತ್ತಾರೆ ಎಂದು ಸಾಕ್ಷಿ ನುಡಿದಿರುತ್ತಾರೆ ಇದಕ್ಕೆ ನೀವೇನು ಹೇಳುವಿರಿ?

ಆರೋಪಿಯ ಉತ್ತರಃ- ಸುಳ್ಳು

ಪ್ರಶ್ನೆಃ 4. ಫ್ರಾಸಾ-1 ರವರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಪಿರ್ಯಾದಿಯವರು ನಿಮಗೆ ವಕೀಲರ ಮೂಲಕ ದಿನಾಂಕ 19-04-2024 ರಂದು ನಿಪಿ-3 ರಂತೆ ರಿಜಿಸ್ಟರ್ ನೋಟಿಸ್ ಕಳುಹಿಸಿದ್ದು, ಸದರಿ ನೋಟಿಸ್‌ನ್ನು ಆರೋಪಿಯಾದ ನೀವು ಸ್ವಿಕರಿಸದೇ ದಿನಾಂಕ 22-04-2024 ರಂದು ನಿಮಗೆ ಜಾರಿಯಾಗಿದ್ದರೂ ಸಹ ನೀವು ಸದರಿ ಚೆಕ್ ನಲ್ಲಿ ನಮೂದಿಸಿದ ಹಣವನ್ನು ನೀಡಿರುವುದಿಲ್ಲ ಎಂದು ಸಾಕ್ಷಿ ನುಡಿದಿರುತ್ತಾರೆ ಇದಕ್ಕೆ ನೀವೇನು ಹೇಳುವಿರಿ?

ಆರೋಪಿಯ ಉತ್ತರಃ- ಸುಳ್ಳು

ಪ್ರಶ್ನೆ 5: ನಿಮ್ಮ ಪರವಾಗಿ ಏನಾದರೂ ಸಾಕ್ಷಿ ಇದೆಯೇ?

ಆರೋಪಿಯ ಉತ್ತರಃ- ಇದೆ

ಪ್ರಶ್ನೆ 6: ಸದ್ರಿ ಪ್ರಕರಣ ಕುರಿತು ನೀವು ಏನಾದರೂ ಹೇಳುವುದು ಇದೆಯೇ?

ಆರೋಪಿಯ ಉತ್ತರಃ- ಆರೋಪ ಸುಳ್ಳು

(ಈ ಮೂಲಕ ಪ್ರಮಾಣಿಸುವುದೇನೆಂದರೆ ಆರೋಪಿಯು ಕೊಟ್ಟಂತ ಹೇಳಿಕೆಯ ಉತ್ತರವನ್ನು ಪಡೆಯಲಾಗಿದೆ )

ಸಹಿ ಇದೆ/-

**ದಿನಾಂಕಃ- 15-09-2025.**

**(ಅನಿಲ್ ಜೋನ್ ಸಿಕ್ವೇರಾ).,**
**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಮ್.ಎಫ್.ಸಿ.,ಯವರ ನ್ಯಾಯಾಲಯ.,ಹೊನ್ನಾವರ.**

****

ಆರೋಪಿಯ ಸಹಿಃ- ಸಹಿ ಇದೆ